ಸಂಯುಕ್ತ ಕರ್ನಾಟಕ

**Dtd-Wednesday, 14th, February- 2018** **Page No. 07**


# ವಿದೇಶಿ ಮೆಡಿಕಲ್ ಶಿಕ್ಷಣಕ್ಕೂ ನೀಟ್

ನವದೆಹಲಿ: ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ವೈದ್ಯಕೀಯ ಶಿಕ್ಷಣ ಪಡೆಯಲು ತೆರಳುವ ವಿದ್ಯಾರ್ಥಿಗಳಿಗೂ ನೀಟ್ ಪರೀಕ್ಷೆಯನ್ನು ಕಡ್ಡಾಯಗೊಳಿಸಿ ಕೇಂದ್ರ ವೈದ್ಯಕೀಯ ಶಿಕ್ಷಣ ಸಚಿವಾಲಯ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿದೆ. ಭಾರತೀಯ ವೈದ್ಯಕೀಯ ಮಂಡಳಿ ಶಿಫಾರಸ್ಸಿನ ಮೇರೆಗೆ ಈ ಹೊಸ ನಿಯಮವನ್ನು ಅಳವಡಿಸಲಾಗಿದೆ.

2016ರಿಂದ ದೇಶದ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ನೀಟ್ ಪರೀಕ್ಷೆ ಜಾರಿಗೆ ತರಲಾಗಿತ್ತು, ಈಗ ಆ ನಿಯಮವನ್ನು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೂ ಅನ್ವಯಿಸಲಾಗುತ್ತಿದೆ. ರಷ್ಯಾ ಮತ್ತು ಚೀನಾ ದೇಶಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾರತೀಯ ವಿದ್ಯಾರ್ಥಿಗಳು ವೈದ್ಯಕೀಯ ಪದವಿ ಶಿಕ್ಷಣಕ್ಕಾಗಿ ತೆರಳುತ್ತಿದ್ದಾರೆ.

ವಿದೇಶಗಳಿಂದ ಪ್ರತಿವರ್ಷ ಸುಮಾರು 7 ಸಾವಿರ ಭಾರತೀಯ ವೈದ್ಯಕೀಯ ಪದವೀಧರರು ವಾಪಸಾಗುತ್ತಿದ್ದು ಅವರ ಪೈಕಿ ಶೇ.15ರಷ್ಟು ಮಂದಿ ಮಾತ್ರ ಮೆಡಿಕಲ್ ಪ್ರಾಕ್ಟೀಸ್‌ಗೆ ಕಡ್ಡಾಯವಾಗಿರುವ ಎಫ್‌ಎಂಜಿಇ ಪರೀಕ್ಷೆಯಲ್ಲಿ ಉತ್ತೀರ್ಣರಾಗುತ್ತಿದ್ದಾರೆ. ಇನ್ನುಳಿದವರು ಅಕ್ರಮವಾಗಿ ವೈದ್ಯ ವೃತ್ತಿ ದಂಧೆಯಲ್ಲಿ ತೊಡಗುತ್ತಾರೆ. ಇಂತಹ ಅಪಾಯಕಾರಿ ಸನ್ನಿವೇಶವನ್ನು ನಿಯಂತ್ರಿಸಲು ಎಂಸಿಐ ಸಲಹೆಯ ಮೇರೆಗೆ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಚಿವಾಲಯದ ಅಧಿಕೃತ ವಕ್ತಾರರು ವಿವರಿಸಿದ್ದಾರೆ.